**<u>ದಿನಾಂಕಃ 27.11.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**
<u>ಪಾಟೀ ಸವಾಲುಃ ಪ್ರತಿ**ವಾದಿ ಪರ ಶ್ರೀ** ಜೆ.ಬಿ.ಆರ್ **ವಕೀಲರಿಂದಃ**</u>

ನಾನು ಯಾವುದೇ ವಿಧ್ಯಾಭ್ಯಾಸ ಮಾಡಿರುವುದಿಲ್ಲ. ನನಗೆ ಓದಲು ಮತ್ತು ಬರೆಯಲು ಬರುವುದಿಲ್ಲ, ಆದರೆ ಸಹಿ ಮಾಡುತ್ತೇನೆ. ಈ ದಿನ ನ್ಯಾಯಾಲಯಕ್ಕೆ ನಾನೇ ಸ್ವತಃ ಬಂದಿರುತ್ತೇನೆ. ನನಗೆ ನ್ಯಾಯಾಲಯದಿಂದ ಸಾಕ್ಷ್ಯ ನುಡಿಯಲು ಸಮನ್ಸ ಬಂದಿರುವುದಿಲ್ಲ. ಈ ದಾವೆಯನ್ನು ಮಿನಾಕ್ಷಿರವರು ಶಿವಮಲ್ಲಪ್ಪರವರ ವಿರುದ್ಧ ಸಲ್ಲಿಸಿರುತ್ತಾರೆ. ಮಿನಾಕ್ಷಿ ಮತ್ತು ಶಿವಮಲ್ಲಪ್ಪರವರು ನನ್ನ ಸಂಬಂಧಿಕರು ಎಂದರೆ ಸರಿಯಲ್ಲ. ನಾನು ಸಲ್ಲಿಸಿರುವ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತಿಲ್ಲ. ಅದೇ ರೀತಿ ವಾದಿಗಳು ಪ್ರತಿವಾದಿಯ ವಿರುದ್ಧ ಏನು ಪರಿಹಾರ ಕೋರಿ ದಾವೆ ಸಲ್ಲಿಸಿದ್ದಾರೆ ಎನ್ನುವುದು ನನಗೆ ಗೊತ್ತಿಲ್ಲ. ಈ ದಿನ ನನ್ನನ್ನು ವಾದಿಯಾದ ಮಿನಾಕ್ಷಿರವರು ನ್ಯಾಯಾಲಯಕ್ಕೆ ಸಾಕ್ಷ್ಯ ನುಡಿಯಲು ಕರೆದುಕೊಂಡು ಬಂದಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರು ಮುಂದುವರೆದು ಮಿನಾಕ್ಷಿರವರು ನನ್ನನ್ನು ನ್ಯಾಯಾಲಯಕ್ಕೆ ಕರೆದುಕೊಂಡು ಬಂದಿರುತ್ತಾರೆ ಎಂದು ನುಡಿಯುತ್ತಾರೆ.

ಪ್ರತಿವಾದಿಯ ತಂದೆಯ ಹೆಸರು ಯಾಕನೂರು ಪುಟ್ಟಬುದ್ದಿ ಎಂದರೆ ಸರಿ. ಸದರಿ ಪುಟ್ಟಬುದ್ದಿಯವರು ಯಾಕನೂರು ಗ್ರಾಮದಲ್ಲಿಯೇ ವಾಸ ಮಾಡಿ ಅಲ್ಲೇ ಮರಣ ಹೊಂದಿದ್ದರು ಎಂದರೆ ಸರಿ. ಸದರಿ ಪುಟ್ಟಬುದ್ದಿಯವರು ಮರಣ ಹೊಂದಿದ್ದ ನಂತರ ಪ್ರತಿವಾದಿಯು ದಾವಾ ಅನುಸೂಚಿ ಸ್ವತ್ತನ್ನು ಸಾಗುವಳಿ ಮಾಡಿಕೊಂಡು ಸ್ವಾಧೀನತೆ ಹೊಂದಿದ್ದರು ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತಿನಲ್ಲಿ ಪ್ರತಿವಾದಿಯು ಕಬ್ಬನ್ನು ಬೆಳೆಯುತ್ತಿದ್ದಾರೆ ಎಂದರೆ ಸರಿಯಲ್ಲ. ದಾವಾ ಅನುಸೂಚಿ ಸ್ವತ್ತು ಪ್ರತಿವಾದಿಯ ಪಿತ್ರಾರ್ಜಿತ ಆಸ್ತಿ ಎಂದರೆ ಸರಿಯಲ್ಲ. ಪ್ರತಿವಾದಿಯ ಜಮೀನಿನ ಅಕ್ಕಪಕ್ಕದಲ್ಲಿ ನನಗೆ ಸೇರಿದ ಜಮೀನು ಇರುತ್ತದೆ. ಸದರಿ ಜಮೀನಿನ ಸರ್ವೇ ನಂ.93/1 ಆಗಿರುತ್ತದೆ. ಸದರಿ ಸರ್ವೇ ನಂ.93/1 ರ ಜಮೀನಿನ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿರುವುದಿಲ್ಲ. ದಾವಾ ಅನುಸೂಚಿ ಸ್ವತ್ತಿನಲ್ಲಿ ಪ್ರತಿವಾದಿಯು ತನ್ನ ತಂದೆಯ ಕಾಲದಿಂದಲೂ ಸ್ವಾದೀನತೆ ಹೊಂದಿ ವ್ಯವಸಾಯ ಮಾಡುತ್ತಿದ್ದರೂ ಸಹ ವಾದಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪಹಣಿ ಪತ್ರಿಕೆಗಳಲ್ಲಿ ದಾವಾ ಅನುಸೂಚಿ ಸ್ವತ್ತಿನ ಖಾತೆಯು ಪ್ರತಿವಾದಿಯ ಹೆಸರಿನಲ್ಲಿಯೇ ಬರುತ್ತಿದೆ ಎಂದರೆ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ.

<u>ಮರುವಿಚಾರಣೆಃ ಇರುವುದಿಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ